24/2023-24
6-05-2023

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 45 ಯುಎಂವಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 05.05.2023.

ಇವರಿಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)
ಬೆಂಗಳೂರು-560 001.

ಇವರಿಗೆ,
ಕುಲಸಚಿವರು,
ಮೈಸೂರು ವಿಶ್ವವಿದ್ಯಾಲಯ,
ಮೈಸೂರು-570 006.

ಮಾನ್ಯರೇ,

ವಿಷಯ: ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಕಾಲೇಜಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆ ನೀಡುವ ಕುರಿತು.

ಉಲ್ಲೇಖ:
1. ಮೈಸೂರು ವಿಶ್ವವಿದ್ಯಾನಿಲಯದ ಆನ್‌ಲೈನ್ ಸಂಯೋಜನಾ ವರದಿ.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021.
3. ಸರ್ಕಾರದ ಸುತ್ತೋಲೆ ಸಂ. ಇಡಿ 384 ಯುಎನ್ಇ 2020, ದಿನಾಂಕ:18.02.2022
4. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 218 ಯುಎನ್ಇ 2020, ದಿನಾಂಕ: 24.08.2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಪತ್ರದನ್ವಯ, ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಈ ಕಾಲೇಜಿನ Bachelor of Education B.Ed ಕೋರ್ಸಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಶಾಶ್ವತ ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಜೊತೆಯಲ್ಲಿ ಓದಲಾದ ಪ್ರಕರಣ 62(1)ರಡಿ ಅಗತ್ಯವಾಗುವ ಶಿಫಾರಸ್ಸನ್ನು ಕೋರಿ, ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ, ಆನ್‌ಲೈನ್ ತಂತ್ರಾಶದಲ್ಲಿ ಅಳವಡಿಸಿರುವ ಪ್ರಪತ್ರಗಳಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರಿಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು, ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

6/5/23
Office of the Director
College Development Council
Moulya Bhavan, Bogadi Road,
Manasagangothri, Mysore-570 006.

.....2



ತತ್ಪರಿಣಾಮವಾಗಿ, ಕಟ್ಟಡದ ಸುರಕ್ಷತೆ/ಸಂರಚನೆ ಸ್ಥಿರತೆ ಕುರಿತು ಲೋಕೋಪಯೋಗಿ ಇಲಾಖೆಯಿಂದ ಹಾಗೂ ಅಗ್ನಿ ಸುರಕ್ಷತೆ ಕುರಿತು ಕರ್ನಾಟಕ ಅಗ್ನಿ ಮತ್ತು ತುರ್ತು ಸೇವೆಗಳ ಇಲಾಖೆಯಿಂದ ಪ್ರಮಾಣಪತ್ರಗಳನ್ನು ಮತ್ತು ಅಧಿಕೃತ ಪ್ರಾಧಿಕಾರದಿಂದ ನ್ಯಾಕ್‌ಪ್ರಮಾಣಪತ್ರವನ್ನು 6 ತಿಂಗಳ ಒಳಗಾಗಿ ಪಡೆದು ವಿಶ್ವವಿದ್ಯಾಲಯದಲ್ಲಿ ಹಾಜರುಪಡಿಸುವ ಮತ್ತು ಹಾಗೂ NCTE ಯಿಂದ ಸದರಿ ಕಾಲೇಜಿಗೆ ವಿಧಿಸಿರುವ ಎಲ್ಲಾ ನಿಬಂಧನೆಗಳನ್ನು ಪೂರೈಸಿರುವ ಷರತ್ತಿಗೊಳಪಟ್ಟು, ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಈ ಕಾಲೇಜು,, ಇಲ್ಲಿ ಅಸ್ತಿತ್ವದಲ್ಲಿರುವ ಈ ಕೆಳಕಂಡ ವ್ಯಾಸಂಗಕ್ರಮಕ್ಕೆ ಕೋರ್ಸಿನ ಮುಂದೆ ತೋರಿಸಲಾಗಿರುವ ವಿದ್ಯಾರ್ಥಿ ಪ್ರಮಾಣಗಳಿಗೆ ಅನ್ವಯಿಸುವಂತೆ, 2022-23ನೇ ಸಾಲಿನಿಂದ 5 ವರ್ಷಗಳ ಅವಧಿಗೆ ಹೊಸದಾಗಿ ಶಾಶ್ವತ ಸಂಯೋಜನೆಯನ್ನು ನೀಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಜೊತೆಯಲ್ಲಿ ಓದಲಾದ ಪ್ರಕರಣ 62(1)ರಡಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

| ಕ್ರ.ಸಂ | ವ್ಯಾಸಂಗಕ್ರಮ | ವಿಷಯ ಸಮೂಹ | ವಿಭಾಗ | ವಿದ್ಯಾರ್ಥಿ ಪ್ರಮಾಣ |
|---|---|---|---|---|
| 1 | B.Ed., | ವಿ.ವಿ.ಪರಿನಿಯಮಗಳಂತೆ | 01 | 50 |

ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರು ಪೀಠ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಈ ಕಾಲೇಜಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಹೊಸ ಶಾಶ್ವತ ಸಂಯೋಜನೆಯನ್ನು ಮಂಜೂರು ಮಾಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;
7. ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

....3



8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಒಂದು ವೇಳೆ ಈ ಪತ್ರದಲ್ಲಿ ತಿಳಿಸಿರುವ ಪ್ರತಿಯೊಂದು ಷರತ್ತುಗಳನ್ನು ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರು ಪೀಠ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಈ ಕಾಲೇಜು ನಿಗದಿತ ಸಮಯದಲ್ಲಿ ಪೂರೈಸದಿದ್ದಲ್ಲಿ, ಸ್ವಯಂಚಾಲಿತವಾಗಿ ಈ ಕಾಲೇಜಿನ ಸಂಯೋಜನೆಯು ರದ್ದಾಗುತ್ತದೆ. ಮೈಸೂರು ವಿಶ್ವವಿದ್ಯಾಲಯವು ಈ ಕಾಲೇಜಿಗೆ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಪೂರೈಸದಿದ್ದಲ್ಲಿ, ಅದನ್ನು ಖಚಿತಪಡಿಸಿಕೊಂಡು ಕಾಲೇಜಿನ ಸಂಯೋಜನೆಯನ್ನು ಕೂಡಲೇ ಹಿಂಪಡೆದು ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದೆಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1)

ಪ್ರತಿ:
1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
3. ಪ್ರಾಂಶುಪಾಲರು, ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರು ಪೀಠ ಕಾಲೇಜ್ ಆಫ್ ಎಜುಕೇಷನ್, ಮೈಸೂರು.
4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)